1064 ಶ್ರೀ ಗೋಪಾಲ ಭಂಡಾರಿ ಹೆಚ್ (ಕಾರ್ಕಳ) : ಮಾನ್ಯ ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಗೆ ವಿಮಾನ ನಿಲ್ದಾಣ ಮಾಡಲು ಸರ್ಕಾರ ಉದ್ದೇಶಿಸಿದೆಯೇ;

ಆ) ಹಾಗಿದ್ದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡಲು ಯಾವ ಯಾವ ತರಹದ ಪ್ರಸ್ತಾವನೆ ಸರ್ಕಾರ ಮುಂದೆ ಇದೆ;

ಇ) ಈ ಬಗ್ಗೆ ಸ್ಥಳ ಆಯ್ಕೆ ಮಾಡುವ ಜವಾಬ್ದಾರಿ ಯಾರಿಗೆ ವಹಿಸಲಾಗಿದೆ;

ಈ) ವಿಮಾನ ನಿಲ್ದಾಣ ಮಾಡುವುದಿದ್ದರೆ ಎಂದಿನಿಂದ ಕಾರ್ಯಾರಂಭ ಮಾಡಲಾಗುವುದು?

ಪ್ರವಾಸೋದ್ಯಮ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು :

ಅ) ಉಡುಪಿ ಜಿಲ್ಲೆಗೆ ವಿಮಾನ ಇಳಿದಾಣ (Airstrip) ಮಾಡಲು ಸರ್ಕಾರ ಉದ್ದೇಶಿಸಿದೆ.

ಆ) ಉದ್ದೇಶಿತ ಉಡುಪಿ ವಿಮಾನ ಇಳಿದಾಣವನ್ನು 20 ಆಸನಗಳ ಏರ್‌ಕ್ರಾಫ್ಟ್ ಅಥವಾ ATR-72 ಸಾಮರ್ಥ್ಯದ ಏರ್‌ಕ್ರಾಫ್ಟ್ ಆಪರೇಷನ್‌ಗೆ ವಿನ್ಯಾಸಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಇ) ಉಡುಪಿ ಜಿಲ್ಲಾಡಳಿತ ಮತ್ತು ಕರ್ನಾಟಕ ಗೃಹ ನಿರ್ಮಾಣ ಮಂಡಳಿಗೆ ವಹಿಸಲಾಗಿದೆ.

ಈ) ಉಡುಪಿಯಲ್ಲಿ ವಿಮಾನ ಇಳಿದಾಣ ನಿರ್ಮಿಸಲು ಸ್ಥಳ ಆಯ್ಕೆ ಕಾರ್ಯವು ಪ್ರಗತಿಯಲ್ಲಿರುವುದು.

865 ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರಸೀಕೆರೆ ತಾಲ್ಲೂಕಿನ ಜಾವಗಲ್ ಹೋಬಳಿಯಲ್ಲಿ ಪೊಲೀಸ್ ಸ್ಟೇಷನ್ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪೊಲೀಸ್ ಸ್ಟೇಷನ್ ಮಂಜೂರು ಮಾಡಲು ಸರ್ಕಾರ ಏನು ಕ್ರಮ ತೆಗೆದು ಕೊಂಡಿದೆ?

ಶ್ರೀ ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಅರಸೀಕೆರೆ ತಾಲ್ಲೂಕಿನ ಜಾವಗಲ್ ಹೋಬಳಿಯಲ್ಲಿ ಪೊಲೀಸ್ ಹೊರ ಠಾಣೆ ಈಗಾಗಲೇ ಕಾರ್ಯನಿರ್ವಹಿಸುತ್ತಿದೆ.